ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 210 ದಿನಾಂಕ:29-06-2024 ಶನಿವಾರ ಪುಟ:4 ರೂ.2-00 ಉಪಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issuse:210 Date:29-06-2024 Saturday page:4 Rs:2-00 subEditor: Supritha Wadeyar

## ವಾಲ್ಮೀಕಿ ನಿಗಮದ ಹಣ ಕಾಂಗ್ರೆಸ್ ಚುನಾವಣಾ ವೆಚ್ಚಕ್ಕೆ ಬಳಕೆ; ಬಿಜೆಪಿ ಆರೋಪ-ಬೃಹತ್ ಪ್ರತಿಭಟನೆ

ದಾವಣಗೆರೆ:-

ವಾಲ್ಮೀಕಿ ನಿಗಮದಲ್ಲಿ ಸರಕಾರಿ ಹಣದ ವರ್ಗಾವಣೆಯ ಗೋಲ್‌ಮಾಲ್ ವಿರೋಧಿಸಿ ಹಾಗೂ ಅನ್ಯಾಯಕ್ಕೊಳಗಾದ ಎಸ್. ಟಿ. ಸಮುದಾಯಕ್ಕೆ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಶಾಸಕ ಬಿ.ಪಿ ಹರೀಶ್ ಹಾಗೂ ಲೋಕಸಭಾ ಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ್ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಇದೇ ವೇಳೆ ಪ್ರತಿಭಟನಾನಿರತರು ಜಿಲ್ಲಾಧಿಕಾರಿ ಕಚೇರಿಗೆ ನುಗ್ಗಲು ಯತ್ನಿಸಿದ ಘಟನೆಯೂ ಜರುಗಿತು. ಅಷ್ಟೇ ಅಲ್ಲದೇ ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳನ್ನು ತಳ್ಳಿಹಾಕಿದ್ದಲ್ಲದೇ ಜಿಲ್ಲಾಧಿಕಾರಿ ಕಚೇರಿಯ ಗೇಟ್ ಹತ್ತುವ ಮೂಲಕ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕೂಡಲೇ ಸ್ಥಳದಲ್ಲಿದ್ದ ಪೋಲೀಸರು ಪ್ರತಿಭಟನಾಕಾರರನ್ನು ನಿಯಂತ್ರಿಸಿ ಪರಿಸ್ಥಿತಿ ತಿಳಿಗೊಳಿಸಿದರು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ಹಣ ವರ್ಗಾವಣೆಯ ಅವ್ಯವಹಾರ ನಡೆದಿದೆ. ಈ ಹಣ ಕಾಂಗ್ರೆಸ್ ನ ಚುನಾವಣಾ ವೆಚ್ಚಕ್ಕೆ ಬಳಕೆಯಾಗಿರುವ ಶಂಕೆ ಇದೆ ಎಂದರು. ನಿಗಮದ ಎಂ.ಡಿ.ಪದ್ಮನಾಭ್ ವ್ಯವಹಾರದಲ್ಲಿ ನಡೆದಿರುವುದರಲ್ಲಿ ತನ್ನ ಸಹಿಯನ್ನು ಪೋರ್ಜರಿ ಮಾಡಲಾಗಿದೆ ಎನ್ನುತ್ತಿದ್ದಾರೆ ಈ ಬಗ್ಗೆ ಸಮಗ್ರ ತನಿಖೆ ನಡೆಸಬೇಕು.ಹಣಕಾಸು ಸಚಿವರಾದ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಇದಕ್ಕೆ ಹೊಣೆಯಾಗಬೇಕು. ಸಚಿವ ನಾಗೇಂದ್ರ ರಾಜೀನಾಮೆಯೊಂದೇ ಇದಕ್ಕೆ ಪರಿಹಾರವಲ್ಲ ಇದರ ಹಿಂದಿರುವ ಕಾಣದ ಕೈಗಳು ಹೊರಬರಬೇಕು. ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕೆ ಬಿಡುಗಡೆಯಾದ ಹಣದ ಅವ್ಯವಹಾರ ನಡೆಸಿ ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಪಂಗಡಕ್ಕೆ ದ್ರೋಹ ಮಾಡಿದೆ. ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ಹಿಂದುಳಿದ ವರ್ಗಗಳ ಸಮುದಾಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಮೀಸಲಿರಿಸಿದ್ದ ಸುಮಾರು 24 ಸಾವಿರ ಕೋಟಿ ರೂ.ಗಳನ್ನು ಕಾಂಗ್ರೆಸ್ ಸರ್ಕಾರ ಇತರೆ ಯೋಜನೆಗಳಿಗೆ ಬಳಸಿಕೊಂಡಿರುವುದು. ಆ ಸಮುದಾಯಕ್ಕೆ ಮಾಡಿದ ಅನ್ಯಾಯ ಎಂದು ಆರೋಪಿಸಿದರು.

ನಿಗಮದ ಅಧಿಕಾರಿ ಚಂದ್ರಶೇಖರ್ ಅವರ ಆತ್ಮಹತ್ಯೆಯ ಡೆತ್ ನೋಟ್‌ನಲ್ಲಿ ಸ್ಪಷ್ಟವಾಗಿ ಸಚಿವರ ಮೌಖಿಕ ಆದೇಶ ಎಂದು ಬರೆದಿದ್ದರೂ, ಇದೂವರೆಗೂ ಈ ಪ್ರಕರಣದಲ್ಲಿ ಯಾವುದೇ ತನಿಖಾ ಸಂಸ್ಥೆಯಿಂದ ಇದುವರೆಗೂ ಸಚಿವರನ್ನು ತನಿಖೆಗೊಳಪಡಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ದುರಂತವೆಂದರೆ ಎಸ್ಟಿ ಮೀಸಲು ಕ್ಷೇತ್ರಗಳಿಂದ ಗೆದ್ದ ಕರ್ನಾಟಕದ ಶಾಸಕರುಗಳು ಈ ಸಮುದಾಯಕ್ಕೆ ಇಷ್ಟು ಅನ್ಯಾಯವಾದರೂ ಸಹ ಮೌನವಾಗಿರುವುದು ಈ ಸಮುದಾಯಕ್ಕೆ ಮಾಡಿದ ದ್ರೋಹವಾಗಿದೆ.

ವರ್ಗಾವಣೆಯಾದ ಹಣವೆಲ್ಲವು ಹಣಕಾಸು ಇಲಾಖೆಯಡಿಯಲ್ಲಿಯೇ ನಡೆದಿದೆ.

ಆದರೂ ಹಣಕಾಸು ಇಲಾಖೆಯು ಹೊಣೆ ಹೊತ್ತಿರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಡೆದ ಹಗರಣದ ಹೊಣೆಯನ್ನು ಹೊರಬೇಕು ಎಂದರು.

ರಾಜ್ಯದ ಹಣಕಾಸು ನಿರ್ವ ಹಣೆ ಮುಖ್ಯಮಂತ್ರಿಗಳೇ ನಿರ್ವಹಿಸುವುದರಿಂದ, ವಾಲ್ಮೀಕಿ ನಿಗಮದ ಹಣ ವರ್ಗಾವಣೆ ಸಂಬಂಧಿಸಿದಂತೆ ನಡೆದ ಅವ್ಯವಹಾರದಲ್ಲಿ ಮುಖ್ಯಮಂತ್ರಿಗಳು ಕೂಡ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.



ಪ್ರತಿಭಟನಾನಿರತರು ಜಿಲ್ಲಾಧಿಕಾರಿ ಕಚೇ ರಿಗೆ ನುಗ್ಗಲು ಯತ್ನಿಸಿದ ಘಟನೆಯೂ ಜರುಗಿತು.ಅಷ್ಟೇ ಅಲ್ಲದೇ ಪ್ರತಿಭಟನಾಕಾರರು ಬ್ಯಾರಿಕೇಡ್ ಗಳನ್ನು ತಳ್ಳಿಹಾಕಿದ್ದಲ್ಲದೇ ಜಿಲ್ಲಾಧಿಕಾರಿ ಕಚೇರಿಯ ಗೇಟ್ ಹತ್ತುವ ಮೂಲಕ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕೂಡಲೇ ಸ್ಥಳದಲ್ಲಿದ್ದ ಪೋಲೀಸರು ಪ್ರತಿಭಟನಾಕಾರರನ್ನು ನಿಯಂತ್ರಿಸಿ ಪರಿಸ್ಥಿತಿ ತಿಳಿಗೊಳಿಸಿದರು.

# ಭೀಕರ ಅಪಘಾತ: 13 ಸಾವು

## ಪುಣೆ- ಬೆಂಗಳೂರು ರಾ. ಹೆದ್ದಾರಿಯಲ್ಲಿ ನಿಂತಿದ್ದ ಲಾರಿಗೆ, ಟಿಟಿ ವಾಹನ ಡಿಕ್ಕಿ- ನಾಲ್ವರಿಗೆ ಗಾಯ



ಹಾವೇರಿ:-

ನಿಂತಿದ್ದ ಲಾರಿಗೆ ಹಿಂದಿನಿಂದ ವೇಗವಾಗಿ ಬಂದ ಟೆಂಪೋ ಟ್ರಾವೆಲ್ಲರ್ (ಟಿಟಿ) ಡಿಕ್ಕಿ ಹೊಡೆದು ಸಂಭವಿಸಿದ ಭೀಕರ ಅಪಘಾತದಲ್ಲಿ 7 ಮಂದಿ ಮಹಿಳೆಯರು ಸೇರಿ 13 ಮಂದಿ ಸ್ಥಳದಲ್ಲೇ ಮೃತಪಟ್ಟ ದಾರುಣ ಘಟನೆ ಬ್ಯಾಡಗಿ ತಾಲೂಕಿನ ಗುಂಡೇನಹಳ್ಳಿ ಕ್ರಾಸ್ ಬಳಿ ಇಂದು ಮುಂಜಾನೆ ನಡೆದಿದೆ.

ಬ್ಯಾಡಗಿ ತಾಲೂಕಿನ ಗುಂಡೇನಹಳ್ಳಿ ಕ್ರಾಸ್ ಬಳಿಯ ಬೆಂಗಳೂರು- ಪುಣೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿ ಟಿಟಿ ವಾಹನದಲ್ಲಿದ್ದ 7 ಮಂದಿ ಮಹಿಳೆಯರು ಸೇರಿದಂತೆ 13 ಜನ ಮೃತಪಟ್ಟಿದ್ದಾರೆ.

### ಗ್ರಾಮದಲ್ಲಿ ಸೂತಕದ ಛಾಯೆ

ಅಪಘಾತದಲ್ಲಿ 13 ಮಂದಿ ಸಾವಿನ ಸುದ್ದಿ ಕೇಳಿ ಎಮ್ಮೆಹಟ್ಟಿ ಗ್ರಾಮದಲ್ಲಿ ಸೂತಕದ ಛಾಯೆ ಆವರಿಸಿದೆ. ಮೃತ ವಿಶಾಲಾಕ್ಷಮ್ಮ, ಆದರ್ಶ, ನಾಗೇಶ್, ಭಾಗ್ಯ, ಮಾನಸ, ಸುಭದ್ರತಾಯಿ ಮೂಲತಃ ಎಮ್ಮೆಹಟ್ಟಿ ಗ್ರಾಮದವರಾಗಿದ್ದು,ಅಲ್ಲಿನ ಜನತೆ ನೋವಿನಲ್ಲಿದ್ದಾರೆ. ಪರಶುರಾಮ್, ರೂಪ ದಂಪತಿಗಳು ಶಿವಮೊಗ್ಗ ನಗರದ ಹಾಲ್ಕೋಳ ನಿವಾಸಿಗಳು. ಮಂಜುಳಬಾಯಿ, ಮಂಜುಳ ಭದ್ರಾವತಿ ತಾಲೂಕಿನ ಕಲ್ಯಾಳ್ ಸರ್ಕಲ್‌ನವರು. ಅಂಜು ಕಡೂರು ತಾಲೂಕಿನ ಬೀರೂರು ನಿವಾಸಿ. ಪುಣ್ಯಬಾಯಿ ಭದ್ರಾವತಿ ತಾಲೂಕಿನ ಮಾಚೇನಹಳ್ಳಿ ಹಾಲಿನ ಡೈರಿ ಗ್ರಾಮದ ನಿವಾಸಿಯಾಗಿದ್ದಾರೆ. ಎಮ್ಮೆಹಟ್ಟಿ ಗ್ರಾಮದ ಶಾಲಾ ಆವರಣದಲ್ಲಿ ಮೃತರ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಎಮ್ಮೆಹಟ್ಟಿ ಗ್ರಾಮದ ಹಿಂದೂ ರುದ್ರಭೂಮಿಯಲ್ಲಿ ಅಂತ್ಯಸಂಸ್ಕಾರಕ್ಕೆ ಸಿದ್ಧತೆ ಮಾಡಲಾಗಿದೆ.

### ಪರಿಹಾರಕ್ಕೆ ಬೊಮ್ಮಾಯಿ ಆಗ್ರಹ

ಇಂದು ಬೆಳಗಿನ ಜಾವ ಹಾವೇರಿ ಜಿಲ್ಲೆ ಬ್ಯಾಡಗಿ ತಾಲೂಕಿನ ಗುಂಡೇನಳ್ಳಿ ಕ್ರಾಸ್ ಬಳಿ ನಡೆದ ಭೀಕರ ಅಪಘಾತದಲ್ಲಿ 13 ಜನರು ಸಾವಿಗೀಡಾಗಿರುವ ಸುದ್ದಿ ಕೇಳಿ ಆಘಾತವಾಗಿದೆ. ಎಂದು ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ದೇವರು ಮೃತರ ಆತ್ಮಕ್ಕೆ ಶಾಂತಿ ನೀಡಲಿ, ಅವರ ಅಗಲಿಕೆಯ ದುಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬಸ್ಥರಿಗೆ ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆ. ರಾಜ್ಯ ಸರ್ಕಾರ ಮೃತರ ಕುಟುಂಬಗಳಿಗೆ ಮುಖ್ಯಮಂತ್ರಿ ಪತಿಹಾರ ನಿಧಿಯಿಂದ ಸೂಕ್ತ ಪರಿಹಾರ ನೀಡಬೇಕು. ಹಾಗೂ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಒದಗಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಎಮ್ಮೆಹಟ್ಟಿ ಗ್ರಾಮದ ಪರಶುರಾಮ್ (45), ಭಾಗ್ಯ (40), ನಾಗೇಶ (50), ವಿಶಾಲಾಕ್ಷಿ (40), ಅರ್ಪಿತಾ (18), ಸುಭದ್ರಾ ಬಾಯಿ (65), ಪುಣ್ಯ (50), -3ನೇ ಪುಟಕ್ಕೆ

## ಅಮರನಾಥ ಯಾತ್ರೆಗೆ ಸಿನ್ಹಾ ಚಾಲನೆ



ಜಮ್ಮು -ಕಾಶ್ಮೀರ:-

ಪ್ರತಿ ವರ್ಷ ನಡೆಯುವ ಅಮರನಾಥ ಯಾತ್ರೆ ಆರಂಭವಾಗಿದೆ. ಜಮ್ಮು ಮತ್ತು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಇಂದು ಶುಕ್ರವಾರ (ಜೂನ್ 28) ಬೆಳಿಗ್ಗೆ 4.30 ಕ್ಕೆ ಜಮ್ಮುವಿನ ಮೂಲ ಶಿಬಿರದಿಂದ ಭಕ್ತರ ಮೊದಲ ಬ್ಯಾಚ್ ಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದ್ದಾರೆ. ಈ ಭಕ್ತರ ಗುಂಪು ಮಧ್ಯಾಹ್ನ 2 ಗಂಟೆಗೆ ದಕ್ಷಿಣ ಕಾಶ್ಮೀರದ ಪಹಲ್ಗಾಮ್ ಮತ್ತು ಮಧ್ಯ ಕಾಶ್ಮೀರದ ಬಲ್ತಾಲ್ ತಲುಪಲಿದೆ.

ಅಮರನಾಥ ಯಾತ್ರಿಕರ ಮೊದಲ ಬ್ಯಾಚ್ ಇಂದು (ಜೂನ್ 28) ಜಮ್ಮುವಿನಿಂದ ಕಾಶ್ಮೀರದ ಅವಳಿ -3ನೇ ಪುಟಕ್ಕೆ

## ಹೇಮಂತ್ ಸೋರೇನ್‌ಗೆ ಜಾಮೀನು



ರಾಂಚಿ:-

ಅಕ್ರಮ ಹಣ ವರ್ಗಾವಣೆ ಮತ್ತು ಭೂ ಅವ್ಯವಹಾರ ಪ್ರಕರಣದಲ್ಲಿ ಕಳೆದ ಜನವರಿಯಲ್ಲಿ ಬಂಧಿತರಾಗಿದ್ದ ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಹೇಮಂತ್ ಸೋರೇನ್ ಅವರಿಗೆ ಹೈಕೋರ್ಟ್ ಇಂದು ಜಾಮೀನು ನೀಡಿದೆ.

ಜಾರ್ಖಂಡ್ ಮುಕ್ತಿ ಮೋರ್ಚಾ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಹೇಮಂತ್ ಸೋರೇನ್ ಅವರಿಗೆ ಹೈಕೋರ್ಟ್ ಜಾಮೀನು ನೀಡಿದ್ದು ಇದರಿಂದ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ರಕ್ಷಣಾ ಭೂ ದಾಖಲೆಗಳ ಮೂಲಕ ಕೋಟ್ಯಂತರ ರೂಪಾಯಿ ಮೌಲ್ಯದ ದೊಡ್ಡ ಪ್ರಮಾಣದ ಭೂಮಿ ಸ್ವಾಧೀನಪಡಿಸಿಕೊಳ್ಳಲು ದಾಖಲೆಗಳನ್ನು ತಿರುಚಿದ ಆರೋಪದ ಮೇಲೆ ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೆ ಒಳಗಾಗಿದ್ದರು.

ಜನವರಿ 31 ರಂದು ಜಾರಿ ನಿರ್ದೇಶ -3ನೇ ಪುಟಕ್ಕೆ

## ಸ್ವಾಮೀಜಿಗಳು ಹೇಳಿದ ಮಾತ್ರಕ್ಕೆ ಸಿಎಂ ಬದಲಾವಣೆಯಾಗುತ್ತಾ: ಶಾಮನೂರು ಶಿವಶಂಕರಪ್ಪ

ದಾವಣಗೆರೆ:-

ಸ್ವಾಮೀಜಿಗಳು ಹೇಳಿದ ಮಾತ್ರಕ್ಕೆ ಸಿಎಂ ಬದಲಾವಣೆಯಾಗುತ್ತದೆಯೇ ಎಂದು ಹಿರಿಯ ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದಲ್ಲಿ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದರು. ಬೆಂಗಳೂರಿನಲ್ಲಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರದಿಂದ ಕಂಠೀರವ ಒಳಾಂಗಣ ಕ್ರೀಡಾಂಗಣ ದಲ್ಲಿ ನಾಡಪ್ರಭು ಕೆಂಪೇಗೌಡರ 515 ನೇ ಜಯಂತೋತ್ಸವ ಸಮಾರಂಭದ ಕಾರ್ಯಕ್ರಮದ ಉದ್ಘಾಟನೆ ನಂತರ ಒಕ್ಕಲಿಗ ಸ್ವಾಮೀಜಿಗಳಾದ ಶ್ರೀ ಚಂದ್ರಶೇಖರ ಸ್ವಾಮೀಜಿಗಳು ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಸಿಎಂ ಮಾಡಬೇಕು ಎಂದು ವೇದಿಕೆಯಲ್ಲಿ ತಿಳಿಸಿದ್ದಾರೆ ಎಂದು ಪ್ರಶ್ನಿಸಿದ ಪತ್ರಕರ್ತರಿಗೆ ಹಿರಿಯ ಶಾಸಕರು



ಹೈಕಮಾಂಡ್ ತೀರ್ಮಾನವೇ ಅಂತಿಮ ಅಂದರು.

ಶ್ರೀಗಳು ಸಿಎಂ ಬದಲಾವಣೆ ಮಾಡಬೇಕು ಎಂದಿದ್ದಾರೆ. ಸ್ವಾಮೀಜಿಗಳು ಹೇಳಿದ ಮಾತ್ರಕ್ಕೆ ಸಿಎಂ ಬದಲಾವಣೆ ಸಾಧ್ಯವೇ ಎಂದು ಶಾಸಕರಾದ ಶಾಮನೂರು ಶಿವಶಂಕರಪ್ಪ ಅವರು ಪ್ರಶ್ನಿಸಿದರು. -3ನೇ ಪುಟಕ್ಕೆ

## ಜಗಳೂರು ಮುಖ್ಯರಸ್ತೆ ಅಗಲೀಕರಣಕ್ಕೆ 20 ಕೋಟಿ ಹಣ ಬಿಡುಗಡೆ

ಜಗಳೂರು:-

ಪಟ್ಟಣದ ಮುಖ್ಯರಸ್ತೆ ಸುಗಮ ಸಂಚಾರಕ್ಕಾಗಿ ರಸ್ತೆ ಆಗಲೀಕರಣ ಪ್ರಸ್ತಾವನೆಗೆ 20 ಕೋಟಿ ಅನುದಾನ ಬಿಡುಗಡೆ ಹೊಂದಿದ್ದು ಟೆಂಡರ್ ಪ್ರಕ್ರಿಯೆಯಲ್ಲಿದೆ.ಶೀಘ್ರದಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ದಾವಣಗೆರೆ ಗ್ರಾಮಾಂತರ ಉಪವಿಭಾಗ ಹಾಗೂ ಪೊಲೀಸ್ ಠಾಣೆ ವತಿ ಯಿಂದ ಹಮ್ಮಿಕೊಂಡಿದ್ದ ಸಿಬ್ಬಂದಿಗಳಿಗೆ ಹೆಲ್ಮೆಟ್ ವಿತರಣೆ ಹಾಗೂ ಜನಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು.

ಪಟ್ಟಣದ ಬೀದಿ ಬದಿ ವ್ಯಾಪರಸ್ಥರು,ನನ್ನನ್ನು ಭೇಟಿಯಾಗಿ ರಸ್ತೆ ಅಗಲೀಕರಣ ಮುಂದೂಡಲು ಮನವಿ ಮಾಡಿದ್ದು, ಆದರೆ ಒಬ್ಬ ಜವಾಬ್ದಾರಿಯುತ ರಾಜಕಾರಣಿಯಾಗಿ,ಸುಗಮ ಸಂಚಾರ ಕ್ಕೆ ಅನುವು ಮಾಡುವುದಕ್ಕೆ ರಸ್ತೆ ಅಗಲೀಕರಣ



ಅವಶ್ಯಕವಾ ಗಿದೆ ಎಂದು ಮನವರಿಕೆ ಮಾಡಿಕೊಟ್ಟಿದ್ದೇನೆ ಅಲ್ಲದೆ ರಾಜ್ಯದ ಹಲವು ಪಟ್ಟಣ,ನಗರಗಳಲ್ಲಿ ರಸ್ತೆಗಳು ಅಗಲೀಕರಣ ಮಾಡಿದ್ದಾರೆ.

ಆದರೆ ಜಗಳೂರು ಪಟ್ಟಣದಲ್ಲಿ ಏಕೆ ಬೇಡ ಎಂಬ ಪ್ರಶ್ನೆ ಗಳನ್ನು ಅವರ ಮುಂದೆ ಇಟ್ಟಿದ್ದೇನೆ ರಸ್ತೆ ಅಗಲೀಕರಣಕ್ಕೆ ನಿಮ್ಮ ಗಳ ಸಹಕರ ತುಂಬಾ ಮುಖ್ಯ ಎಂದು ಮನವರಿಕೆ ಮಾಡಿದ್ದೇನೆ ಅಲ್ಲದೇ ಪ.ಪಂ ಮುಖ್ಯಾಧಿಕಾರಿ,ಗುತ್ತೇಗೆದಾರ,ಮತ್ತು ಇಂಜಿನಿ ಯರ್‌ಗಳ ಲೋಕೋಪಯೋಗಿ ಇಲಾಖೆ ಹೀಗೆ ಎಲ್ಲಾರ ಸಮ್ಮುಖದಲ್ಲಿ -3ನೇ ಪುಟಕ್ಕೆ

## ಒಂದನೇ ಪುಟದಿಂದ

# ಭೀಕರ ಅಪಘಾತ: 13 ಸಾವು

ಮಂಜುಳಾಬಾಯಿ, ಚಾಲಕ ಆದರ್ಶ್ (23), ಮಾನಸ (24), ರೂಪಾ (40), ಮಂಜುಳಾ (50) ಮೃತರು ಮೃತಪಟ್ಟವರು.

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿರುವ ನಾಲ್ವರನ್ನು ಜಿಲ್ಲಾ ಆಸ್ಪತ್ರೆಗೆ ( ದಾಖಲಿಸಲಾಗಿದ್ದು ಅವರಲ್ಲಿ ಇಬ್ಬರು ಸ್ಥಿತಿ ಚಿಂತಾಜನಕವಾಗಿದೆ. ಮೃತ ನಾಗೇಶ್ ಎಮ್ಮೆಹಟ್ಟಿ ಗ್ರಾಮದ ಕೃಷಿಕರಾಗಿದ್ದರೆ,ಅವರ ಪತ್ನಿ ವಿಶಾಲಾಕ್ಷಿ ಆಶಾ ಕಾರ್ಯಕರ್ತೆಯಾಗಿದ್ದರು, ನಾಗೇಶ್ ಮತ್ತು ವಿಶಾಲಕ್ಷಿ ದಂಪತಿ ಪುತ್ರ ಆದರ್ಶ್ ಹೊಸ ಸೆಕೆಂಡ್ ಹ್ಯಾಂಡ್ ಟಿಟಿ ವಾಹನ ಖರೀದಿಸಿದ್ದರು.

ಹೊಸ ಟಿಟಿ ವಾಹನಕ್ಕೆ ಪೂಜೆ ಮಾಡಿಸಲು ಹೋಗಿದ್ದ ಕುಟುಂಬದವರು ಸೇರಿ 15 ಮಂದಿ ಕಳೆದ ಜೂ. 24 ರಂದು ಮಧ್ಯಾಹ್ನ 12 ಗಂಟೆಗೆ ಸುಮಾರಿಗೆ ಶಿವಮೊಗ್ಗದಿಂದ ಹೊರಟು, ಮಹಾರಾಷ್ಟ್ರ ತಿವಾರಿ ಲಕ್ಷ್ಮೀ ದೇವಸ್ಥಾನ ತಲುಪಿದ್ದಾರೆ. ಅಲ್ಲಿ ವಾಹನ ಪೂಜೆ ಮಾಡಿಸಿ, ಬಳಿಕ ತುಳಜಾಭವಾನಿ ದೇವಸ್ಥಾನಕ್ಕೆ ತೆರಳಿ ದೇವಿಯ ದರ್ಶನ ಪಡೆದಿದ್ದಾರೆ. ನಂತರ ಕಲಬುರಗಿ ಜಿಲ್ಲೆಯ ಚಿಂಚೋಳಿಯ ಮಾಯಮ್ಮ ದೇವಸ್ಥಾನಕ್ಕೆ
ಹೋಗಿದ್ದಾರೆ.

ಅಲ್ಲಿಂದ ಬೆಳಗಾವಿ ಜಿಲ್ಲೆಯ ಸವದತ್ತಿಗೆ ಆಗಮಿಸಿ, ರೇಣುಕಾ ಯಲ್ಲಮ್ಮನ ದರ್ಶನ ಪಡೆದು ಮರಳಿ ಊರಿಗೆ ಹೋಗುವಾಗ ಈ ಭೀಕರ ಅಪಘಾತ ಸಂಭವಿಸಿದೆ. 15 ದಿನಗಳ ಹಿಂದೆ ಖರೀದಿ: ಅಪಘಾತ ಸಂಭವಿಸಿದ ಸೆಕೆಂಡ್ ಹ್ಯಾಂಡ್ ಟೆಂಪೋ ಟ್ರಾವೆಲರ್( ಟಿಟಿ) ವಾಹನವನ್ನು 15 ದಿನಗಳ ಹಿಂದೆಯಷ್ಟೇ ಖರೀದಿಸಲಾಗಿತ್ತು.ದೇವರ ದರ್ಶನಕ್ಕೆ ಕುಟುಂಬ ಸಮೇತ ತೆರಳಿದ್ದ ಚಾಲಕ ಆದರ್ಶ, ಪೂಜೆಯ ಬಳಿಕ ಅದರ ಫೋಟೋಗಳನ್ನು ತಮ್ಮ ಸ್ಟೇಟಸ್‌ನಲ್ಲಿ ಹಾಕಿಕೊಂಡಿದ್ದರು.

ರಸ್ತೆ ಬದಿ ನಿಲ್ಲಿಸಿದ್ದ ಲಾರಿಯನ್ನು ಮುಂಜಾನೆ ಕವಿದಿದ್ದ ಮಂಜು ಕವಿದಿದ್ದರಿಂದ ಲಾರಿ ಕಾಣಿಸದೇ ಟಿಟಿ ಚಾಲಕ ಆದರ್ಶ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ.

ಅಪಘಾತದ ಪರಿಣಾಮ ಟಿಟಿ ವಾಹನ ಸಂಪೂರ್ಣವಾಗಿ ನಜ್ಜುಗುಜ್ಜಾಗಿ, ಅದರಲ್ಲಿ ಮೃತದೇಹಗಳು ಅಪ್ಪಚ್ಚಿಯಾಗಿದ್ದು, ಅಗ್ನಿಶಾಮಕ ಇಲಾಖೆ ಸಿಬ್ಬಂದಿ ಹರಸಾಹಸ ಪಟ್ಟು ಮೃತದೇಹಗಳನ್ನು ಹೊರ ತೆಗೆದಿದ್ದಾರೆ.

**ಅತಿವೇಗದ ಚಾಲನೆ:**

ಈ ಬಗ್ಗೆ ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶಿಕುಮಾರ್ ಮಾತನಾಡಿ, ಟಿಟಿ ವಾಹನದಲ್ಲಿದ್ದ ಒಟ್ಟು 15 ಮಂದಿ ಸವದತ್ತಿ ರೇಣುಕಾ ಯಲ್ಲಮ್ಮ ದರ್ಶನ ಪಡೆದು ಮರಳಿ ಊರಿಗೆ ಹೋಗುತ್ತಿರುವಾಗ ಅಪಘಾತ ಸಂಭವಿಸಿದೆ. ಅತಿವೇಗದ ಚಾಲನೆಯೇ ಅಪಘಾತಕ್ಕೆ ಕಾರಣವಾಗಿದ್ದು, ಮಹಿಳೆಯರು, ಎರಡು ಪುಟ್ಟ ಕಂದಮ್ಮಗಳು, ಇಬ್ಬರು ಗಂಡು ಮಕ್ಕಳು, ಡ್ರೈವರ್ ಮೃತಪಟ್ಟಿದ್ದಾರೆ. ಮೃತ ದೇಹಗಳನ್ನು ಹಾವೇರಿ ಜಿಲ್ಲಾ ಆಸ್ಪತ್ರೆಯ ಶವಗಾರಕ್ಕೆ ರವಾನಿಸಲಾಗಿದೆ. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬ್ಯಾಡಗಿ ಠಾಣಾ ಪೊಲೀಸರು ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಜಗಳೂರು ಮುಖ್ಯರಸ್ತೆ ಅಗಲೀಕರಣಕ್ಕೆ 20 ಕೋಟಿ ಹಣ ಬಿಡುಗಡೆ

ನಡೆಸಿ,ನಮ್ಮ ಪಟ್ಟಣ ಸ್ವಚ್ಛ ಸುಂದರ ಪಟ್ಟಣವಾಗುವುದಕ್ಕೆ ಶ್ರಮಿಸಬೇಕು ಎಂದು ಸೂಚಿಸಿದ್ದೇನೆ.

ಸಾರ್ವಜನಿಕ ಸ್ಥಳಗಳಲ್ಲಿ ಕರ್ಕಶ ಶಬ್ದದಿಂದ ಶಬ್ದ ಮಾಲಿನ್ಯ ಉಂಟುಮಾಡುತ್ತಿರುವ ಬೈಕ್ ಗಳನ್ನು ಸೀಜ್ ಮಾಡಬೇಕು. ಸಾರ್ವಜನಿಕರು ಹೆಲ್ಮೆಟ್ ಧರಿಸಿ ಪೊಲೀಸ್ ಇಲಾಖೆಯ ಸುರಕ್ಷಿತ ನಿಯಮಗಳನ್ನು ಪಾಲಿಸಬೇಕು.ಅಪಘಾತ ಸಂದರ್ಭ ದಲ್ಲಿ ಬೈಕ್ ಸವಾರರು ಸಾವಿನಿಂದ ರಕ್ಷಣೆ ಮಾಡಿಕೊಳ್ಳಿ ಎಂದರು.

ನನ್ನ ಆಡಳಿತಾವಧಿಯಲ್ಲಿ ವಿಂಡ್ ಫ್ಯಾನ್ ಅಳವಡಿಕೆಗೆ ಅವ ಕಾಶ ನೀಡುವುದಿಲ್ಲ.ಉದ್ಗಟ್ಟ ವಸತಿ ಶಾಲೆ ಪಕ್ಕದಲ್ಲಿ ಶಾಲಾ ಮಕ್ಕಳಿಗೆ ದುಷ್ಪರಿಣಾಮ ಬೀರುತ್ತಿರುವ ವಿಂಡ್ ಫ್ಯಾನ್ ತೆರವುಗೊಳಿಸಲು ಸೂಚಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಮಾತನಾಡಿ ದೇಶದಲ್ಲಿ ಪ್ರತಿಗಂಟೆಗೆ ಸಂಭವಿಸುವ 52 ಜನರ ಪ್ರಮಾಣದಲ್ಲಿ 19 ಜನ ಹೆಲ್ಮೆಟ್ ಧರಿಸದೆ ಸಾವನ್ನಪ್ಪುತ್ತಿದ್ದಾರೆ. ಪ್ರತಿ ವರ್ಷಕ್ಕೆ 52000 ಜನರು ಹೆಲ್ಮೆಟ್ ಧರಿಸದೆ ಸಾವನ್ನಪ್ಪು ವ ಮಾಹಿತಿ ಲಭ್ಯವಾಗಿದೆ. ದೇಹದ ಸೂಕ್ಷ್ಮ ಹಾಗೂ ಮುಖ್ಯ ಅಂಗ ತಲೆಭಾಗವಾಗಿದ್ದು ಪ್ರತಿಯೊಬ್ಬ ದ್ವಿಚಕ್ರವಾಹನ ಸವಾರ ನು ಜೀವರಕ್ಷಣೆಗಾಗಿ ಗುಣಾತ್ಮಕ ಹೆಲ್ಮೆಟ್ ಧರಿಸಬೇಕು ಅಂತೆ ಯೇ ಸಾರ್ವಜನಿಕರಿಗೆ ದಂಡವಿಧಿಸುವ ಪೊಲೀಸ್ ಸಿಬ್ಬಂದಿ ಗಳು ಮೊದಲು ಹೆಲ್ಮೆಟ್ ಧರಿಸಿ ಮಾದರಿಯಾಗಬೇಕು ಎಂದು ಸಲಹೆ ನೀಡಿದರು.

ದಾವಣಗೆರೆ ಗ್ರಾಮಾಂತರ ವಿಭಾಗದ ಡಿವೈಎಸ್ ಪಿ ಬಸವ ರಾಜ್ ಮಾತನಾಡಿ ಯುವಕರು ಡ್ರಗ್ಸ್ ತೆಗೆದುಕೊಳ್ಳುವ ಮಾಹಿತಿಯನ್ನು 112 ಮೂಲಕ ಮಾಹಿತಿಕೊಡಿ ಪರೀಕ್ಷೆಗೊಳ ಪಡಿಸಿ ಸಾಬೀತಾದರೆ ನಿರ್ದಾಕ್ಷಿಣ್ಯವಾಗಿ ಪ್ರಕರಣ ದಾಖಲಿಸ ಲಾಗುವುದು.ಚುಚ್ಚುಮದ್ದು,ಹಾನಿಕಾರಕ ತ್ಯಾಜ್ಯ ವಸ್ತುಗಳನ್ನು ಆರೋಗ್ಯ ಇಲಾಖೆಗೆ ಚರ್ಚಿಸಿ ಸಾರ್ವಜನಿಕ ಸ್ಥಳಗಳಲ್ಲಿ ಎಸೆಯದಂತೆ ನಿಯಂತ್ರಿಸಲಾಗುವುದು ಎಂದರು.

ಇದೇ ವೇಳೆ ಪೊಲೀಸ್ ಸಿಬ್ಬಂದಿಗಳಿಗೆ ಹೆಲ್ಮೆಟ್ ವಿತರಿಸಿದರು. ಪಟ್ಟಣದಲ್ಲಿ ಬೈಕ್ ನಲ್ಲಿ ಎಸ್.ಪಿ,ಡಿ.ವೈ.ಎಸ್.ಪಿ.ಪಿ ಐ ಸಂಚ ರಿಸಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಪಿ.ಐ ಶ್ರೀನಿವಾಸ್ ರಾವ್,ಪಿ.ಎಸ್.ಐ ಸಾಗರ್,ಎ.ಎಸ್.ಐ ಗಳಾದ ಚಂದ್ರಶೇಖರ್, ಶಿವಪ್ರಸಾದ್, ಸಿಬ್ಬಂದಿಗಳಾದ ನಾಗಭೂಷಣ್,ಬಸವರಾಜ್,ಮಾರುತಿ, ಪಕ್ಷಣ್ಣ. ಉಮಾಪತಿ.ನಾಗರಾಜ್. ಪ್ರಶಾಂತ್,ಉಮಾಪತಿ, ಹನುಮಂತ ಕವಾಡಿ.ರಮೇಶ್.ಚಾಮರಾಜ ರೆಡ್ಡಿ. ಮಧುರ. ಅಜ್ಜಯ್ಯ.ಚೈತ್ರ.ಲಕ್ಷ್ಮಿ ದೇವಿ.ಸೇರಿದಂತೆ ಸಾರ್ವಜನಿಕರು ಇದ್ದರು.

# ಅಮರನಾಥ ಯಾತ್ರೆಗೆ ಸಿನ್ಹಾ ಚಾಲನೆ

ಬೇಸ್ ಕ್ಯಾಂಪ್‌ಗಳಿಗೆ ಬಹು ಭದ್ರತಾ ಬೆಂಗಾವಲುಗಳ ನಡುವೆ ಹೊರಡಿದೆ. ಈ ವರ್ಷ ಇಲ್ಲಿಂದಲೇ ಅಮರನಾಥ ಯಾತ್ರೆ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಗುರುವಾರ ರಾತ್ರಿ ಜಮ್ಮುವಿನ ಅಮರನಾಥ ಯಾತ್ರಾ ಮೂಲ ಶಿಬಿರಕ್ಕೆ ಭೇಟಿ ನೀಡಿದ್ದಾರೆ. ಯಾತ್ರೆಯ ಅಂತಿಮ ವ್ಯವಸ್ಥೆಗಳನ್ನು ಪರಿಶೀಲಿಸಲಾಗಿದೆ.

ಹಿಂದೂಗಳು ಎದುರು ನೋಡುತ್ತಿರುವ ಅಮರನಾಥ ಯಾತ್ರೆಗೆ ಎಲ್ಲವೂ ಸಿದ್ಧವಾಗಿದೆ. ಅಮರನಾಥ ಯಾತ್ರಿಕರ ಮೊದಲ ಬ್ಯಾಚ್ ಇಂದು (ಜೂನ್ 28) ಜಮ್ಮುವಿನಿಂದ ಕಾಶ್ಮೀರದ ಅವಳಿ ಬೇಸ್ ಕ್ಯಾಂಪ್‌ಗಳಿಗೆ ಬಹು ಭದ್ರತಾ ಬೆಂಗಾವಲುಗಳ ನಡುವೆ ಹೊರಡಲಿದೆ. ಈ ವರ್ಷ ಇಲ್ಲಿಂದಲೇ ಅಮರನಾಥ ಯಾತ್ರೆ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಗುರುವಾರ ರಾತ್ರಿ ಜಮ್ಮುವಿನ ಅಮರನಾಥ ಯಾತ್ರಾ ಮೂಲ ಶಿಬಿರಕ್ಕೆ ಭೇಟಿ ನೀಡಿದ್ದಾರೆ. ಯಾತ್ರೆಯ ಅಂತಿಮ ವ್ಯವಸ್ಥೆಗಳನ್ನು ಪರಿಶೀಲಿಸಲಾಗಿದೆ. ಗುರುವಾರ ಸಂಜೆ ಜಮ್ಮುವಿನ ಅಮರನಾಥ ಮೂಲ ಶಿಬಿರದಲ್ಲಿ ಯಾತ್ರಾರ್ಥಿಗಳು ವಿಶೇಷ ಪೂಜಾ ಕಾರ್ಯಕ್ರಮ ನಡೆಸಿದ್ದಾರೆ. ವಿಘ್ನ ವಿನಾಯಕನನ್ನು ಭಕ್ತಿಯಿಂದ ಪೂಜಿಸಲಾಗಿದೆ. ತಮ್ಮ ಪ್ರಯಾಣವನ್ನು ಯಾವುದೇ ಅಡೆತಡೆಯಿಲ್ಲದೆ ಸಾಗಲಿ ಎಂದು ಗಣಪತಿಯನ್ನು ಬೇಡಿ-ಕೊಂಡಿದ್ದಾರೆ. ಸಂತಸದ ಕುಣಿತ ಹಾಗೂ ದೇವರನ್ನು ಕೊಂಡಾಡುವ ಹಾಡುಗಳೊಂದಿಗೆ ಬೇಸ್ ಕ್ಯಾಂಪ್‌ನಲ್ಲಿ ಹರ್ಷದ ವಾತಾವರಣ ನಿರ್ಮಾಣವಾಗಿದೆ.

ಅಮರನಾಥ ಯಾತ್ರೆಗೆ ಅಧಿಕಾರಿಗಳು ಮಾಡಿರುವ ವ್ಯವಸ್ಥೆ ಬಗ್ಗೆ ಯಾತ್ರಾರ್ಥಿಗಳು ಸಂತಸ ವ್ಯಕ್ತಪಡಿಸಿದ್ದಾರೆ. ಇಂದು ಯಾತ್ರಾರ್ಥಿಗಳು ಪಹಲ್ಗಾಮ್ ಮತ್ತು ಬಲ್ಟಾಲ್ ಶಿಬಿರಗಳನ್ನು ತಲುಪಲಿದ್ದಾರೆ. ನಾಳೆ (ಜೂನ್ 29) ಅಮರನಾಥ ಯಾತ್ರೆ ಪಹಲ್ಗಾಮ್ ನ ಬಲ್ಟಾಲ್ ನಿಂದ ಆರಂಭವಾಗಲಿದೆ. ಸಾವಿರಾರು ಯಾತ್ರಾರ್ಥಿಗಳು ಈ ಪವಿತ್ರ ಪ್ರವಾಸವನ್ನು ಕೈಗೊಳ್ಳುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಪೊಲೀಸ್ ಮಹಾನಿರ್ದೇಶಕ ಆರ್ ಆರ್ ಸ್ವೈನ್, ಸಿನ್ಹಾ, ಭಗವತಿ ನಗರದ ಮೂಲ ಶಿಬಿರವನ್ನು ಪರಿಶೀಲಿಸಿದ್ದಾರೆ. ಅಂತಿಮ ಸಿದ್ಧತೆಗಳನ್ನು ಪರಿಶೀಲಿಸಲು ಸಭೆಯನ್ನು ಏರ್ಪಡಿಸಲಾಗಿತ್ತು.

ಲೆಫ್ಟಿನೆಂಟ್ ಗವರ್ನರ್ ಕೂಡ ಯಾತ್ರಾರ್ಥಿಗಳನ್ನು ಭೇಟಿ ಮಾಡಿ ಅವರೊಂದಿಗೆ ಸಂವಾದ ನಡೆಸಿದರು. ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತು ಪರಿಶೀಲನೆ ನಡೆಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಕ್ತರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳು ಲೆಫ್ಟಿನೆಂಟ್ ಗವರ್ನರ್ ಅವರಿಗೆ ಅಮರನಾಥ ಯಾತ್ರೆಯನ್ನು ಸುಗಮವಾಗಿ ನಡೆಸಲು ಸಕಲ ವ್ಯವಸ್ಥೆ ಕಲ್ಪಿಸಿದ್ದಾರೆ.

# ಗ್ರಾ.ಪಂ ಸೌಲಭ್ಯಗಳು ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಸಮರ್ಪಕವಾಗಿ ತಲುಪಲಿ: ಅಹ್ಮದ್




ರಾಯಚೂರು:-

ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿರುವ ಸ್ವ-ಸಹಾಯ ಗುಂಪುಗಳಿಗೆ ಗ್ರಾಮ ಪಂಚಾ ಯತಿಯ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಲು ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಮುಂದಾಗಬೇಕು ಎಂದು ಮಾನವಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಖಾಲೀದ್ ಅಹ್ಮದ್ ಅವರು ಹೇಳಿದರು. ಅವರು ಜಿಲ್ಲೆಯ ಮಾನವಿ ಪಟ್ಟಣದ ಶಾಸಕರ ಭವನದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸವರ್ಧನ ಸಂಸ್ಥೆ, ಜಿಲ್ಲಾ ಪಂಚಾಯತ್ ರಾಯಚೂರು, ತಾಲೂಕು ಪಂಚಾಯತ್ ಮಾನವಿ, ತಾಲೂಕು ಸಂಜೀವಿನಿ ನಿರ್ವಹಣಾ ಘಟಕ, ಸಿರಿ ಸಂಜೀವಿನಿ ತಾಲ್ಲೂಕು ಮಟ್ಟದ ಒಕ್ಕೂಟರವರ ಸಹಯೋಗದಲ್ಲಿ ಹಮ್ಮಿ ಕೊಂಡಿದ್ದ ಪಂಚಾಯತ್ ರಾಜ್ ಸಂಸ್ಥೆ ಮತ್ತು ಸಮುದಾಯ ಆಧಾರಿತ ಸಂಸ್ಥೆಗಳ ಒಗ್ಗೂಡಿಸುವಿಕೆ ಕಾರ್ಯಕ್ರಮದ ತರಬೇತಿ ಕಾರ್ಯಾಗಾರವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ, ಮಾತನಾಡಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮೀಣ ಸರ್ವ ತೋಮುಖ ಅಭಿವೃದ್ಧಿಯನ್ನು ಸಾಧಿಸಲು ಹಲವಾರು ಕಾರ್ಯಕ್ರಮ ಸರಕಾರದ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಗೊಳಿಸುತ್ತಿದೆ. ಗ್ರಾಮಗಳಲ್ಲಿ ವಿವಿಧ ಇಲಾಖೆಗಳಿಂದ ಮತ್ತು ಸ್ವಯಂ ಸೇವಾ ಸಂಸ್ಥೆಗಳಿಂದ ರಚಿಸಲ್ಪಟ್ಟಿರುವ ಸ್ವ-ಸಹಾಯ ಸಂಘಗಳು ಕುಟುಂಬದ, ಸಮುದಾಯದ ಮತ್ತು ಗ್ರಾಮದ ಅಭಿವೃದ್ಧಿಯಲ್ಲಿ ತಮ್ಮದೇ ಆದ ಕೊಡುಗೆ ನೀಡುತ್ತಿದೆ ಎಂದರು. ಉದ್ಯಮ ವಲಯದಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಮಾಹಿತಿ ತಲುಪಿಸಿ ಉದ್ಯಮಶೀಲರನ್ನಾಗಿ ಮಾಡುವ ಮೂಲಕ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣ ಮಾಡಬೇಕು. ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ ಸ್ವ ಸಹಾಯ ಗುಂಪಿನ ಮಹಿಳೆಯರಿಗೆ ಬ್ಯಾಂಕ್ ಸಂಪರ್ಕ ಕಲ್ಪಿಸಬೇಕು. ಬ್ಯಾಂಕ್ ನಿಂದ ದೊರಕುವ ವಿವಿಧ ಸೌಲಭ್ಯಗಳನ್ನು ಮಹಿಳೆಯರಿಗೆ ತಲುಪಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತಿ ಎನ್.ಆರ್. ಎಲ್.ಎಮ್ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ಶ್ರೀನಾಥ ಅವರು ಮಾತನಾಡಿ, ಗ್ರಾಮಗಳ ಅಭಿವೃದ್ಧಿ ಸಾಧಿಸಲು, ಸಮುದಾಯದ ಅವಕಾಶ ವಂಚಿತರು, ದುರ್ಬಲರನ್ನು ಗುರುತಿಸಿ ಅವರಿಗೆ ಅಗತ್ಯ ಸೇವೆಗಳನ್ನು ಒದಗಿಸಬೇಕಾಗಿದೆ. ಗ್ರಾಮದ ಯೋಜನೆಗಳನ್ನು ರೂಪಿಸುವಲ್ಲಿ ಮತ್ತು ಅದನ್ನು ಅನುಷ್ಠಾನಗೊಳಿಸುವಲ್ಲಿ ಸಮುದಾಯದ ಭಾಗವಹಿಸುವಿಕೆಯು ಪ್ರಮುಖ ಪಾತ್ರವಹಿಸುತ್ತಿದೆ ಎಂದರು.

ಸ್ವ-ಸಹಾಯ ಗುಂಪಿನ ಮಹಿಳೆಯರು ತಮ್ಮ ಆರ್ಥಿಕ ಸ್ವಾವಲಂಬನೆಯನ್ನು ಸಾಧಿಸುವ ಮುಖೇನ ಅಭಿವೃದ್ಧಿಯತ್ತ ದಾಪುಗಾಲು ಹಾಕುತ್ತಿರುವ ಮಹಿಳಾ ಸ್ವ-ಸಹಾಯ ಸಂಘಗಳು, ಸ್ಥಳೀಯ ಸರ್ಕಾರಗಳಾದ ಪಂಚಾಯತಿಗಳಿಂದ ಬಹಳ ದೂರ ಉಳಿದಿವೆ. ಮುಂಬುರವ ದಿನಗಳಲ್ಲಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಗ್ರಾಮ ಪಂಚಾಯತಿ ಯೋಜನೆಗಳ ಮಾಹಿತಿ ನೀಡಬೇಕೆಂದು ತಿಳಿಸಿದರು.

ಎನ್ .ಆರ್.ಎಲ್.ಎಮ್ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ ಶಿವರಾಜ್ ಅವರು ಪ್ರಾಸ್ತಾವಿಕ ಮಾತನಾಡಿ, ಕರ್ನಾಟಕದಲ್ಲಿ 2023-24ನೇ ಆರ್ಥಿಕ ವರ್ಷದಲ್ಲಿ ಪಂಚಾಯತ್ ರಾಜ್ ಸಂಸ್ಥೆ ಮತ್ತು ಸಮುದಾಯ ಆಧಾರಿತ ಸಂಸ್ಥೆಗಳ ಒಗ್ಗೂಡಿಸುವಿಕೆ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ರಾಯಚೂರು ಜಿಲ್ಲೆಯನ್ನು ಆಯ್ಕೆ ಮಾಡಲಾಗಿದೆ. ಕಾರ್ಯ ಕ್ರಮವು 18 ತಿಂಗಳಲ್ಲಿ ಅನುಷ್ಠಾನಗೊಳಿಸಲು ಕೇರಳ ರಾಜ್ಯದ ಕುಡುಂಬಶ್ರೀ ರಾಷ್ಟ್ರೀಯ ಸಂಸ್ಥೆ ಹಾಗೂ ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಸಂವರ್ಧನ ಸಂಸ್ಥೆ ಜೊತೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕಿ ದೀಪಾ, ಕೇರಳ ಕುಟುಂಬ ಶ್ರೀ ಸಂಸ್ಥೆಯ ರಾಜ್ಯ ಸಂಪನ್ಮೂಲ ವ್ಯಕ್ತಿ ಅಜೀಷಾ, ಬ್ಲಾಕ್ ಮ್ಯಾನೇಜರ್ ಖಾಸಿಂ, ವಲಯ ಮೇಲ್ವಿಚಾರಕರಾದ ಸೂರತ್ ಪ್ರಸಾದ್ ಗಟ್ಟು, ಶರಣು ಬಸವ, ತಾಲೂಕು ಮಟ್ಟದ ಸಂಪನ್ಮೂಲ ವ್ಯಕ್ತಿ ರುದ್ರಮ್ಮ ಸೇರಿದಂತೆ ಎಲ್ಲಾ ಒಕ್ಕೂಟದ ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಇದ್ದರು.

# ಡೆಂಗ್ಯು ನಿಯಂತ್ರಣ: ಗುಣಾತ್ಮಕ ಲಾರ್ವ ಸಮೀಕ್ಷೆ, ಅಂತರ್ ವೈಯಕ್ತಿಕ ಸಮಾಲೋಚನಾ ಶಿಕ್ಷಣ ಅವಶ್ಯ: ಡಾ.ಜಿ.ಪಿ.ರೇಣುಪ್ರಸಾದ್



ಚಿತ್ರದುರ್ಗ:-

ಡೆಂಗ್ಯೂ ನಿಯಂತ್ರಣಕ್ಕೆ ಗುಣಾತ್ಮಕ ಲಾರ್ವ ಸಮೀಕ್ಷೆ, ಅಂತರ್ ವೈಯಕ್ತಿಕ ಸಮಾಲೋಚನಾ ಶಿಕ್ಷಣ ಅವಶ್ಯಕ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಚಿತ್ರದುರ್ಗ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಡೆಂಗ್ಯೂ ನಿಯಂತ್ರಣಕ್ಕಾಗಿ ಜೂನ್ 25 ರಿಂದ 27 ರವರೆಗೆ ಮೂರು ದಿನಗಳ ಕಾಲ ಡೆಂಗ್ಯೂ ಪ್ರಕರಣಗಳು ಹೆಚ್ಚು ಕಂಡು ಬಂದಿರುವ ಚಿತ್ರದುರ್ಗ ನಗರದ 35 ವಾಗಳ ಎಲ್ಲಾ ಮನೆ ಮನೆಗಳ ಭೇಟಿ, ಲಾರ್ವಾ ಸಮೀಕ್ಷೆ, ಜ್ವರ ಸಮೀಕ್ಷೆ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಡೆಂಗ್ಯೂ ಪ್ರಕರಣ ಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಚಿತ್ರದುರ್ಗ ನಗರದ ಎಲ್ಲಾ ವಾಗ ಳಲ್ಲಿ ವಿಶೇಷ ಲಾರ್ವ ಸಮೀಕ್ಷೆ ಹಮ್ಮಿಕೊಂಡಿದೆ. ಡೆಂಗ್ಯೂ ನಿಯಂ ತ್ರಣಕ್ಕೆ ಗುಣಾತ್ಮಕ ಲಾರ್ವ ಸಮೀಕ್ಷೆ, ಅಂತರ್ ವೈಯಕ್ತಿಕ ಸಮಾಲೋಚನಾ ಶಿಕ್ಷಣ ಅವಶ್ಯಕ ಎಂದರು.

ಜಿಲ್ಲಾ ಆಶ್ರಿತ ರೋಗಗಳ ರೋಗವಾಹಕ ನಿಯಂತ್ರಣಾಧಿಕಾರಿ ಡಾ.ಕಾಶಿ ಮಾತನಾಡಿ, ನಗರ ಪ್ರದೇಶಗಳಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿ ಕಂಡು ಬಂದಿದ್ದರಿಂದ ಜಿಲ್ಲಾ ಮಟ್ಟದ ಅಂತರ್ ಇಲಾಖಾ ಸಮನ್ವಯ ಸಭೆಯಲ್ಲಿ ಜಿಲ್ಲಾಧಿಕಾರಿಗಳವರ ಮಾರ್ಗದರ್ಶನದಂತೆ ಸೊಳ್ಳೆಗಳ ನಿಯಂತ್ರಣಕ್ಕಾಗಿ ಲಾರ್ವಾ ಸಮೀಕ್ಷೆ ಹಮ್ಮಿಕೊಂಡಿದೆ. ಒಟ್ಟು 36 ವಾರ್ಡ್ 3 ನಗರ ಆರೋಗ್ಯ ಕೇಂದ್ರಗಳಿಂದ ಒಟ್ಟು 41117 ಮನೆ ಮನೆ ಭೇಟಿ, ಲಾರ್ವಾ ಸಮೀಕ್ಷೆ, ಜ್ವರ ಪರೀಕ್ಷೆ ಅಲ್ಲಲ್ಲಿ ಗುಂಪು ಸಭೆಯ ಮೂಲಕ ಡೆಂಗ್ಯೂ ನಿಯಂತ್ರಣ ಮಾಹಿತಿ ಶಿಕ್ಷಣ ನೀಡುವುದರ ಮೂಲಕ ಜನ ಜಾಗೃತಿ ಮೂಡಿಸಲಾಗುತ್ತಿದೆ. ಮನೆಯ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿ ಇಟ್ಟುಕೊಳ್ಳಿ. ಘನತ್ಯಾಜ್ಯ ವಸ್ತುಗಳನ್ನು ಸರಿಯಾದ ಜಾಗದಲ್ಲಿ ವಿಲೇವಾರಿ ಮಾಡಿ. ಹಂಚು, ಒಡೆದ ಮಡಕೆ, ಪ್ಲಾಸ್ಟಿಕ್ ಬಾಟಲ್, ಎಳನೀರಿನ ಚಿಪ್ಪು ಇವುಗಳಲ್ಲಿ ಮಳೆ ನೀರು ಸಂಗ್ರಹವಾಗಿ ಸೊಳ್ಳೆಗಳ ಉತ್ಪತ್ತಿ ತಾಣಗಳಾಗದಂತೆ ಕಾಳಜಿ ವಹಿಸಿ, ಹೂವಿನ ಗಿಡಗಳ ಕುಂಡಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಿ. ಡೆಂಗ್ಯೂ ಬಗ್ಗೆ ಆತಂಕ ಭಯ ಬೇಡ ವಾರಕ್ಕೊಮ್ಮೆಯಾದರು ನೀರು ಸಂಗ್ರಹಿಸುವ ತೊಟ್ಟಿ ಟ್ಯಾಂಕ್ ಬ್ಯಾರೆಲ್ ಸ್ವಚ್ಛವಾಗಿ ತೊಳೆದು ಒಣಗಿಸಿ ನೀರು ಸಂಗ್ರಹಿಸಿ ಮುಚ್ಚಳ ಮುಚ್ಚಿ. ತೀವ್ರ ಜ್ವರ, ತಲೆನೋವು ಕಣ್ಣಿನ ಹಿಂಭಾಗ ನೋವು, ಮೈಕೈ ನೋವು ಕಂಡು ಬಂದಲ್ಲಿ ಸ್ವಯಂ ಚಿಕಿತ್ಸೆ ಮಾಡಿಕೊಳ್ಳದೇ ಹತ್ತಿರದ ನಗರ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷೆ, ಚಿಕಿತ್ಸೆ ಸಲಹೆ ಪಡೆದುಕೊಳ್ಳಿ. ಸಾರ್ವಜನಿಕರೆ ಎಚ್ಚರವಾಗಿ, ಬುದ್ಧಿವಂತರಾಗಿ ಸೊಳ್ಳೆಗಳ ಕಡಿತದಿಂದ ಸ್ವಯಂ ರಕ್ಷಣೆ ಮಾಡಿಕೊಳ್ಳಿ. ಮಾರಣಾಂತಿಕ ಡೆಂಗ್ಯೂ ನಿಯಂತ್ರಿಸಿ ಎಂದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸುರೇಶ್ ಬಾಬು, ಪ್ರಸನ್ನಕುಮಾರ್, ನಾಗ ರಾಜ್, ಸಿರೀಶ್, ಶ್ರೀನಿವಾಸ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿ ಕಾರಿಗಳಾದ ಪರ್ವಿನ್, ಸುಶೀಲಾ, ಆಶಾ ಕಾರ್ಯಕರ್ತೆ ಜರೀನಾ, ಗೀತಾ ಉಪಸ್ಥಿತರಿದ್ದರು.

# ಹೇಮಂತ್ ಸೊರೇನ್‌ಗೆ ಜಾಮೀನು

ನಾಲಯದ ಮ್ಯಾರಥಾನ್ ಪ್ರಶ್ನೋತ್ತರ ಅವಧಿ ಪ್ರಾರಂಭಿಸಿದ ಕೆಲವೇ ಗಂಟೆಗಳ ನಂತರ ಹೇಮಂತ್ ಸೊರೇನ್ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ನಂತರ ಅವರನ್ನು ಬಂಧಿಸಲಾಗಿತ್ತು.

ಹೇಮಂತ್ ಸೊರೇನ್ ಅವರು ಮುಖ್ಯಮಂತ್ರಿ ಸ್ಥಾನವನ್ನು ತ್ಯಜಿಸುವವರೆಗೂ ಬಂಧನದ ಮೆಮೊವನ್ನು ಸ್ವೀಕರಿಸಲು ನಿರಾಕರಿಸಿದರು, ಬಂಧನಕ್ಕೊಳಗಾದ ಮೊದಲ ಹಾಲಿ ಮುಖ್ಯಮಂತ್ರಿಯಾಗಿದ್ದಾರೆ.

ರಾಂಚಿಯಲ್ಲಿ 8.86 ಎಕರೆ ಭೂಮಿಯನ್ನು ಅಕ್ರಮವಾಗಿ ಸ್ವಾಧೀನಪಡಿಸಿಕೊಂಡ ಆರೋಪ ಹೇಮಂತ್ ಸೊರೇನ್ ಎದುರಿಸುತ್ತಿದ್ದಾರೆ.


ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಬಳಿಕ ಚಂಪೈ ಸೊರೇನ್ ಅವರನ್ನು ಜಾರ್ಖಂಡ್ ಮುಖ್ಯಮಂತ್ರಿ ಯನ್ನಾಗಿ ಆಯ್ಕೆ ಮಾಡಲಾಗಿತ್ತು. ಮಾಜಿ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರಿಗೆ ಜಾಮೀನು ಸಿಕ್ಕಿರುವುದರಿಂದ ಪಕ್ಷದ ನಾಯಕರು ಕಾರ್ಯಕರ್ತರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

# ಸ್ವಾಮೀಜಿಗಳು ಹೇಳಿದ ಮಾತ್ರಕ್ಕೆ ಸಿಎಂ ಬದಲಾವಣೆಯಾಗುತ್ತಾ: ಶಾಮನೂರು ಶಿವಶಂಕರಪ್ಪ

ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಉತ್ತಮ ಕಾರ್ಯಗಳನ್ನು ಮಾಡುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಪರ ಬ್ಯಾಟಿಂಗ್ ಬೀಸಿದರು. ಮುಖ್ಯಮಂತ್ರಿಗಳ ಬದಲಾವಣೆಯ ವಿಚಾರ ಹೈ ಕಮಾಂಡ್ ಗೆ ಬಿಟ್ಟಿದ್ದು ನಾವು ಹೇಳೋಕೆ ಸಾಧ್ಯವೆ ಎಂದರು ಅಲ್ಲದೆ ಶಾಸಕ ಶಿವಗಂಗಾ ಬಸವರಾಜ್ ಸಿಎಂ ಬದಲಾವಣೆ ಮಾಡಬೇಕು ಎಂದಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಶಾಸಕರು ಅವರಿಗೇನು ಗೊತ್ತು ಯಾರೋ ಚಾರ್ಜ್ ಮಾಡಿ ಹಿಂಗೆ ಹೇಳು ಅಂತಿರಬೇಕು ಎಂದರು.

ಜಾತಿವಾರು ಡಿಸಿಎಂ ಕೇಳುತ್ತಿರುವ ವಿಚಾರಕ್ಕೆ ಶಾಸಕರು ಅದೇಲ್ಲಾ ಸುಮ್ನೆ ಆಗಲ್ಲ ಮಾಡಲ್ಲ ಎಂದ ಅವರು ಏನೆ ಮಾಡಿದ್ರು ಹೈಕಮಾಂಡ್ ನಿರ್ಧಾರ ಮಾಡುತ್ತೆ ಎಂದು ಮಾಧ್ಯಮದವರ ಮುಂದೆ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

# ವಾರದೊಳಗೆ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿ ನೀಡಿ



ಚಿತ್ರದುರ್ಗ:-

ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿ ಯನ್ನು ತಾಲ್ಲೂಕುವಾರು ಸಂಗ್ರಹಿಸಿ ವಾರದೊಳಗೆ ವರದಿ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ 2024ನೇ ಸಾಲಿನ ಎರಡನೇ ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲ್ಯವಿವಾಹ, ಬಾಲ ಕಾರ್ಮಿಕರಾಗುವ ಸಾಧ್ಯತೆ ಇರುವುದರಿಂದ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಪೂರ್ಣ ಮಾಹಿತಿಯನ್ನು ಸಂಗ್ರಹಿಸಿ ವಿವಿಧ ಕಾರ್ಯತಂತ್ರದ ಮೂಲಕ ಮುಖ್ಯವಾಹಿನಿಗೆ ತರಬೇಕು. ಮಕ್ಕಳು ಶಾಲೆಯಿಂದ ಹೊರಗುಳಿಯಲು ಕಾರಣವೇನು ಎಂಬಿತ್ಯಾದಿ ವಿಚಾರಗಳನ್ನು ಸೂಕ್ಷ್ಮವಾಗಿ ಗಮನಿಸಬೇಕು. ಜಿಲ್ಲೆಯಲ್ಲಿ ಯಾವುದೇ ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಕ್ರಮವಹಿಸಬೇಕು ಎಂದು ತಾಕೀತು ಮಾಡಿದರು.ಶಾಲಾ ಶಿಕ್ಷಣ ಇಲಾಖೆಯ ಡಿವೈಪಿಸಿ ವೆಂಕಟೇಶ್ ಮಾತನಾಡಿ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಕ್ರಮವಹಿಸಲಾಗಿದ್ದು, ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ 489 ಮಕ್ಕಳಲ್ಲಿ 27 ಮಕ್ಕಳು ಪ್ರವೇಶಾತಿ ಪಡೆಯುವುದು ಬಾಕಿ ಇದೆ ಎಂದರು.

